**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 123 ಡಿಬಿಎಂ2020(ಭಾಗ)

ಕರ್ನಾಟಕಸರ್ಕಾರದಸಚಿವಾಲಯ
ವಿಧಾನಸೌಧ,
ಬೆಂಗಳೂರು, ದಿನಾಂಕ: 02.05.2020.

**ಸುತ್ತೋಲೆ**

1. ಕರ್ನಾಟಕ ರಾಜ್ಯದಲ್ಲಿ ಕೊರೊನಾವೈರಸ್ (ಕೋವಿಡ್-19) ಸಾಂಕ್ರಾಮಿಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ:ಆರ್‌ಡಿ 158 ಟಿಎನ್‌ಆರ್ 2020 ದಿನಾಂಕ:02.05.2020ರ ಮಾರ್ಗಸೂಚಿಗಳನ್ವಯ ಆರೋಗ್ಯ ಇಲಾಖೆಯು ಕಾಲಕಾಲಕ್ಕೆ ಕೆಂಪು, ಹಸಿರು ಮತ್ತು ಕಿತ್ತಳೆ ವಲಯಗಳನ್ನಾಗಿ ವಿಂಗಢಿಸಿ ಅಧಿಸೂಚಿಸುತ್ತದೆ.

2. ದಿನಾಂಕ:02.05.2020ರ ವಿಂಗಡನೆಯಂತೆ ದಿನಾಂಕ:04.05.2020ರಿಂದ ದಿನಾಂಕ: 17.05.2020ರವರೆಗಿನ ಅವಧಿಯಲ್ಲಿ **ಕೆಂಪು ವಲಯದಲ್ಲಿ ಬರುವ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಮತ್ತು ಮೈಸೂರು ಜಿಲ್ಲೆಗಳಲ್ಲಿ** ಸರ್ಕಾರದ ಸಮ ಸಂಖ್ಯೆಯ ಸುತ್ತೋಲೆ ದಿನಾಂಕ:18.04.2020 ಹಾಗೂ ತಿದ್ದುಪಡಿ ಸುತ್ತೋಲೆ ದಿನಾಂಕ:20.04.2020ಗಳಲ್ಲಿ ಪ್ರಸ್ತಾಪಿಸಿರುವ ಅತ್ಯಗತ್ಯ ಸೇವೆಗಳನ್ನು ಒದಗಿಸುತ್ತಿರುವ ಇಲಾಖೆಗಳಲ್ಲಿನ ಸರ್ಕಾರಿ ಕಛೇರಿಗಳಲ್ಲಿ ಶೇ.100% ರಷ್ಟು ಗ್ರೂಪ್ ಎ, ಬಿ, ಸಿ ಮತ್ತು ಡಿ ವೃಂದದ ಅಧಿಕಾರಿ/ಸಿಬ್ಬಂದಿಗಳು ಕರ್ತವ್ಯಕ್ಕೆ ಹಾಜರಾಗತಕ್ಕದ್ದು. ಉಳಿದ ಇಲಾಖೆಗಳಲ್ಲಿನ ಗ್ರೂಪ್ ಎ ಮತ್ತು ಬಿ ವೃಂದದ ಎಲ್ಲಾ ಅಧಿಕಾರಿಗಳು ಮತ್ತು ಗ್ರೂಪ್ ಸಿ ಮತ್ತು ಡಿ ವೃಂದದ ಶೇ. 33 ರಷ್ಟು ಸಿಬ್ಬಂದಿಗಳು ಕರ್ತವ್ಯಕ್ಕೆ ಹಾಜರಾತಕ್ಕದ್ದು.

3. ದಿನಾಂಕ:04.05.2020ರಿಂದ ಜಾರಿಗೆ ಬರುವಂತೆ ಕಿತ್ತಳೆ ಮತ್ತು ಹಸಿರು ವಲಯಗಳಲ್ಲಿ ಬರುವ ಉಳಿದ ಎಲ್ಲಾ ಜಿಲ್ಲೆಗಳಲ್ಲಿನ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಶೇ.100%ರಷ್ಟು ಗ್ರೂಪ್ ಎ, ಬಿ, ಸಿ ಮತ್ತು ಡಿ ವೃಂದದ ಅಧಿಕಾರಿ/ ಸಿಬ್ಬಂದಿಗಳು ಕರ್ತವ್ಯಕ್ಕೆ ಹಾಜರಾಗತಕ್ಕದ್ದು.

ಟಿಎಂವಿಜಯಭಾಸ್ಕರ 2/5/20
(ಟಿ.ಎಂ. ವಿಜಯ್ ಭಾಸ್ಕರ್)
ಸರ್ಕಾರದ ಮುಖ್ಯ ಕಾರ್ಯದರ್ಶಿ
ಕರ್ನಾಟಕ ಸರ್ಕಾರ

**ಇವರಿಗೆ:-**

1. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿರವರುಗಳಿಗೆ.
2. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ
3. ಎಲ್ಲಾ ಜಿಲ್ಲಾಧಿಕಾರಿರವರುಗಳಿಗೆ.
4. ಶಾಖಾ ರಕ್ಷಾಕಡತ / ಹೆಚ್ಚುವರಿಪ್ರತಿ

Scanned by CamScanner